**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಾಗಮಂಗಲ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: 589/2019**

**ಸಾಕ್ಷಿಗೆ ದಿನಾಂಕ 12-03-2026 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | : | ನಂಧೀಶ ಹೆಚ್.ಸಿ |
| ತಂದೆಯ ಹೆಸರು | : | ಚಂದ್ರಪ್ಪ |
| ವಯಸ್ಸು | : | 45 ವರ್ಷ |
| ಉದ್ಯೋಗ | : | ಮುಖ್ಯ ಪೋಲೀಸ್ ಪೇದೆ. |
| ವಾಸಸ್ಥಳ | : | _ ಪಾಂಡವಪುರ, ಪೋಲೀಸ್ ಠಾಣೆ |

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ನಾನು ಮಾರ್ಚ್ 2017 ರಿಂದ ಅಕ್ಟೋಬರ್ 2017 ಬೆಳ್ಳೂರು ಪೊಲೀಸ್ ಠಾಣೆಯಲ್ಲಿ ಮುಖ್ಯ ಪೋಲೀಸ್ ಪೇದೆಯಾಗಿ ಕರ್ತವ್ಯ ನಿರ್ವಹಿಸಿದ್ದೆನು.

ದಿನಾಂಕ 10.07.2017 ರಂದು ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಮದ್ಯಾಹ್ನ 03.30 ಗಂಟೆಗೆ ಚಾಸಾ 1 ರವರು ಈ ಪ್ರಕರಣದ ಆರೋಪಿ ಮತ್ತುಪ್ರ ಕರಣದಲ್ಲಿ ಜಪ್ತಾದ ಮಾಲಿನೊಂದಿಗೆ ಠಾಣೆಗೆ ಹಾಜರಾಗಿ ವರದಿ ಸಲ್ಲಿಸಿರುತ್ತಾರೆ. ಸದರಿ ವರದಿಯನ್ನು ಸ್ವೀರಿಸಿಕೊಂಡು ಠಾಣಾ ಮೊಕದ್ದಮೆ ಸಂಖ್ಯೆ 196/2107 ರಂತೆ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ. ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಪ್ರತಿಗಳನ್ನು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸದರಿ ವರದಿಯನ್ನು ನೋಡಿದರೆ ಗುರುತಿಸುತ್ತೇನೆ. **ಸಾಕ್ಷಿಯು ವರದಿ ಮತ್ತು ಅದರಲ್ಲಿನ ಸಹಿಯನ್ನು ನೋಡಿ ಗುರುತಿಸಿದ್ದು, ವರದಿಯನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.**

**ಸಾಕ್ಷಿಯು ಪ್ರ ವ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-5 ಎಂದು ಗುರುತಿಸಲಾಯಿತು, ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.**

2. ಅದೇ ದಿನ ಪರಕರಣದಲ್ಲಿ ಜಪ್ತಾದ ಮುದ್ದೆ ಮಾಲುಗಳನ್ನುಸ್ವತ್ತು ಪಟ್ಟಿಗೆ ಅಳವಡಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. **ಸಾಕ್ಷಿಯು ಸ್ವತ್ತು ಪಟ್ಟಿಯನ್ನು ಮತ್ತು ಅದರಲ್ಲಿನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.**

3. ಅದೇದಿನ ಆರೋಪಿಯನ್ನು ದಸ್ತಗಿರಿ ನಿಯಮ ಪಾಲಿಸಿ ಮಾನ್ಯ ನ್ಯಾಯಾಲಯಕ್ಕೆ ಸಿಬ್ಬಂದಿಯೊಂದಿಗೆ ಹಾಜರುಪಡಿಸಿರುತ್ತೇನೆ. ಪ್ರಕರಣದ ಸಾಕ್ಷಿದಾರರಾದ ಚಾಸಾ 2 ರಿಂದ 6 ಮತ್ತು 8 ರವರ ಹೇಳಿಕೆಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಪ್ರಕರಣದಲ್ಲಿ ಜಪ್ತಾದ ಮದ್ಯವನ್ನು ರಾಸಾಯನಿಕ ಪರೀಕ್ಷೆಗೆ ಕಳುಹಿಸಿರುತ್ತೇನೆ. ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ-15 ರವರು ವಹಿಸಿಕೊಂಡಿರುತ್ತಾರೆ. ಆರೋಪಿಯನ್ನು ಪ್ರಕರಣದಲ್ಲಿ ಜಪ್ತಾದ ಮಾಲನ್ನು ನೋಡಿದರೆ ಗುರುತಿಸುತ್ತೇನೆ. ಈ ದಿನ ನ್ಯಾಯಾಲಯದ ಕಟಕಟೆಯಲ್ಲಿ ಹಾಜರಾದ ವ್ಯಕ್ತಿಯೇ ಚಾಸಾ 1 ರವರು ಠಾಣೆಗೆ ಹಾಜರುಪಡಿಸಿದ ವ್ಯಕ್ತಿಯಾಗಿರುತ್ತಾನೆ. **ಜಪ್ತಾದ ಮುದ್ದೆ ಮಾಲುಗಳನ್ನು ಎಂ.ಓ 1 ರಿಂದ 44 ಎಂದು ಗುರುತಿಸಲಾಯಿತು.**

**<u>ಪಾಟೀ ಸವಾಲು ಶ್ರೀಮತಿ ಕೆ.ಆರ್ ಆರೋಪಿತರ ಪರ ವಕೀಲರಿಂದ</u>**

ಚಾಸಾ 1 ರವರು ನಮ್ಮ ಮೇಲಾಧಿಕಾರಿಗಳು ಎಂದರ ಸರಿ. ಸದರಿ ಮೇಲಾದಿಕಾರಿಗಳ ಮಾತನ್ನು ಕೇಳಿ ಆರೋಪಿಯ ವಿರುದ್ದ ಸುಳ್ಳು ದೂರು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

ವರದಿಯನ್ನು ಸ್ವೀಕರಿಸಿದಾಗ ಸಮಯ ಮದ್ಯಾಹ್ನ 03.30 ಆಗಿತ್ತು. ಚಾಸಾ 1 ರವರು ನನಗೆ ಪ್ರಕರಣದ ಬಗ್ಗೆ ವರದಿಯನ್ನು ನೀಡಿದ್ದರು. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂದ ಇಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಮದ್ಯವನ್ನು ರಾಸಾಯನಿಕ ಪರೀಕ್ಷೆಗೆ ಕಳುಹಿಸಿಲ್ಲ ಎಂದರೆ ಸರಿಯಲ್ಲ. ಮೇಲಾಧಿಕಾರಿಗಳ ಮಾತನ್ನು ಕೇಳಿ ಠಾಣೆಯ ಅಂಕಿಅಂಶಕ್ಕೋಸ್ಕರ ದೂರನ್ನು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಸತ್ಯಾಸತ್ಯತೆಗಳು ತಿಳಿದಿದ್ದರೂ ಕೂಡ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯ ತಪ್ಪಿಲ್ಲದಿದ್ದರೂ ಕೂಡ ಸುಳ್ಳು ದೂರು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೆ.ಸರಿ ಇದೆ.**

**ನನ್ನ ಸಮಕ್ಷಮ**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ**
**ಪ್ರ.ದ.ನ್ಯಾ.ದಂಡಾಧಿಕಾರಿಗಳು,**
**ನಾಗಮಂಗಲ.**

**CC. 322/2013**

Case called out. Accused Present.

CW-11 and 17 are present and examined them as PW-6 and 7, documents marked at Ex. P1(c), P2(d,e) and P18 and 19. Advocate for the accused cross-examines PW-6 and 7.

Reissue w/w to CW15, 16 and 18.

**Call on 03-01-2025.**

**Prl. Civil Judge and JMFC.,**
**Nagamangala.**